ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನೀಡಿಕೆಯಲ್ಲಿನ ಸುಧಾರಣೆಗಳು

920 (1544); ಶ್ರೀ ಹ್ಯಾರಿಸ್ ಎನ್.ಎ. (ಶಾಂತಿನಗರ)

ಅ) ರಾಜ್ಯದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನೀಡಿಕೆ ಕುರಿತು ಸರ್ಕಾರ ಕೈಗೊಂಡ ಸುಧಾರಣಾ ಕ್ರಮಗಳು ಯಾವುದು;

ಇ) ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನೀಡಿಕೆಯಲ್ಲಿ ಆಧುನಿಕ ತಂತ್ರಜ್ಞಾನದ ಬಳಕೆ ಮೂಲಕ ಮನೆಗೆ ಪ್ರಮಾಣ ಪತ್ರ ಒದಗಿಸಿಕೊಡುವ ಆನ್‌ಲೈನ್ ವ್ಯವಸ್ಥೆಯು ಜಾರಿಯಲ್ಲಿದೆಯೇ?

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಮಾನ್ಯ ಕಂದಾಯ ಸಚಿವರು)

ಅ) ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಹಾಗೂ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) ಅಧಿನಿಯಮ 1990 ಮತ್ತು ಅದರಡಿ ರಚಿಸಲಾದ ನಿಯಮಗಳು ಮತ್ತು ತಿದ್ದುಪಡಿಗಳನ್ವಯ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ನಾಡಕಛೇರಿಗೆ ವಿತರಿಸಲಾಗುತ್ತಿದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗದವರುಗಳಿಗೆ ನೀಡಲಾಗುತ್ತಿರುವ ಜಾತಿ ಪ್ರಮಾಣ ಪತ್ರಗಳ ಕಾಲಾವಧಿಯು, ಸದರಿ ಪ್ರಮಾಣ ಪತ್ರವನ್ನು ರದ್ದುಪಡಿಸುವವರೆಗೆ ಸಿಂಧುತ್ವದಲ್ಲಿರುತ್ತದೆ ಎಂದು, ಆದಾಯ ಪ್ರಮಾಣ ಪತ್ರಗಳ ಕಾಲಾವಧಿಯು ಐದು ವರ್ಷಗಳವರೆಗೆ ಸಿಂಧುತ್ವದಲ್ಲಿರುತ್ತೆಂದು ಸಮಾಜ ಕಲ್ಯಾಣ ಇಲಾಖೆಯಿಂದ ಹೊರಡಿಸಿದ ಸುತ್ತೋಲೆಯ ಮೇಲೆ ವಿದ್ಯಾರ್ಥಿಗಳಿಂದ ಮತ್ತು ಸಾರ್ವಜನಿಕರಿಂದ ಮೂಲ ಆದಾಯ ಪ್ರಮಾಣ ಪತ್ರ ಮತ್ತು ಜಾತಿ ಪ್ರಮಾಣ ಪತ್ರಗಳನ್ನು ಪಡೆದುಕೊಳ್ಳದೆ ದೃಢೀಕರಿಸಿದ ಪ್ರಮಾಣ ಪತ್ರಗಳನ್ನು ಪಡೆದುಕೊಂಡು, ಅವುಗಳನ್ನು ಮೂಲ ಪ್ರಮಾಣ ಪತ್ರದೊಂದಿಗೆ ಪರಿಶೀಲನೆ ಮಾಡಬೇಕೆಂದು ಸರ್ಕಾರ ಸುತ್ತೋಲೆಯನ್ನು ಹೊರಡಿಸಿರುತ್ತದೆ.

ಅದರಂತೆ, ವಿದ್ಯಾರ್ಥಿಗಳು ಶೈಕ್ಷಣಿಕ ವರ್ಷದ ಪ್ರಾರಂಭದಲ್ಲಿ ಶಾಲೆಗಳಿಗೆ ಪ್ರವೇಶ ಹೊಂದುವ ಸಂದರ್ಭದಲ್ಲಿ ಹಾಜರುಪಡಿಸಬೇಕಾಗಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಪಡೆಯಲು ನಾಡಕಛೇರಿಗಳಿಗೆ ಭೇಟಿ ನೀಡಿ ಅವರ ಸಮಯವನ್ನು ವ್ಯರ್ಥ ಮಾಡುವುದನ್ನು ತಪ್ಪಿಸುವ ದೃಷ್ಟಿಯಿಂದ, ವಿದ್ಯಾರ್ಥಿಗಳು ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಪಡೆಯುವ ವ್ಯವಸ್ಥೆಯನ್ನು ಸರಳೀಕರಣಗೊಳಿಸಿ, ಶಾಲಾ ಮುಖ್ಯಸ್ಥರ ಮೂಲಕ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಸ್ವೀಕರಿಸಿ ನಾಡ ಕಛೇರಿಯಲ್ಲಿ ಅವುಗಳನ್ನು ಅನುಮೋದಿಸಿದ ನಂತರ ಮುದ್ರಿಸಿ, ಲ್ಯಾಮಿನೇಷನ್ ಮಾಡಿಸಿ ಒಟ್ಟು 1.03 ಕೋಟಿ ಪ್ರಮಾಣ ಪತ್ರಗಳನ್ನು ವಿದ್ಯಾರ್ಥಿಗಳಿಗೆ ವಿತರಿಸಲಾಗಿದೆ. ಮುಂದುವರೆದು, ಜಾತಿ ಪ್ರಮಾಣ ಪತ್ರವನ್ನು ಕೋರಿ ಅರ್ಜಿದಾರರು ಈಗಾಗಲೇ ಅರ್ಜಿಯನ್ನು ಸಲ್ಲಿಸಿ ಜಾತಿ ಪ್ರಮಾಣ ಪತ್ರವನ್ನು ಪಡೆದಿದ್ದಲ್ಲಿ, ಅವರಿಗೆ ಸಂಬಂಧಿಸಿದ ಹೆಸರು ಮತ್ತು ಜಾತಿಯ ಹೆಸರನ್ನು ದತ್ತಾಂಶದಲ್ಲಿರುವ ಮಾಹಿತಿಯ ಮೇಲೆ ತಂತ್ರಾಂಶದಲ್ಲಿ ಸ್ಥಿರೀಕರಿಸಿಕೊಂಡು ಓವರ್ ದ ಕೌಂಟರ್‌ನಲ್ಲಿ ಜಾತಿ ಪ್ರಮಾಣ ಪತ್ರವನ್ನು ವಿತರಿಸಲು ಕ್ರಮಕೈಗೊಳ್ಳಲಾಗಿರುತ್ತದೆ.

ಇ) ಅಟಲ್‌ಜೀ ಜನಸ್ನೇಹಿ ಕೇಂದ್ರಗಳಲ್ಲಿ ನೀಡುವ ವಿವಿಧ ಸೇವಾ ಪ್ರಮಾಣ ಪತ್ರಗಳಿಗಾಗಿ ಸಾರ್ವಜನಿಕರು ನಾಡಕಛೇರಿಯಲ್ಲಿ ಅರ್ಜಿಯನ್ನು ನೀಡುವುದರ ಜೊತೆಗೆ ಅಂತರ್ಜಾಲ ಸಂಪರ್ಕ ಹೊಂದಿರುವ ಯಾವುದೇ ವ್ಯಕ್ತಿ ತನ್ನ ಮನೆಯಿಂದ ಅಥವಾ ಸೈಬರ್ ಕೆಫೆಗಳಿಂದ ಅರ್ಜಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಸ್ಕ್ಯಾನ್ ಮಾಡಿ ಸಲ್ಲಿಸಬಹುದಾಗಿದ್ದು, ಸದರಿ ಅರ್ಜಿಯು ಡಿಜಿಟಲ್ ಅನುಮೋದನೆಗೊಂಡ ನಂತರ ಪ್ರಮಾಣ ಪತ್ರದ ಸಂಖ್ಯೆಯನ್ನು ಅರ್ಜಿದಾರರಿಗೆ ಎಸ್.ಎಂ.ಎಸ್. ಕಳುಹಿಸಲಾಗುವುದು. ಅನುಮೋದನೆಗೊಂಡ ಪ್ರಮಾಣ ಪತ್ರವನ್ನು ಅರ್ಜಿದಾರರಿಗೆ ಸ್ಪೀಡ್

ಪೋಸ್ಟ್ ಮುಖಾಂತರ ಅವರ ವಿಳಾಸಕ್ಕೆ ಕಳುಹಿಸಿಕೊಡುವ ವ್ಯವಸ್ಥೆ ಮಾಡಿಕೊಡಲಾಗಿದೆ.

ಮುಂದುವರೆದು ಮುದ್ರಿತ ಪ್ರಮಾಣ ಪತ್ರಗಳ ಬದಲಿಗೆ ಕಾಗದ ರಹಿತ ಪ್ರಮಾಣ ಪತ್ರಗಳ ಸೇವೆಯನ್ನು ಅನುಷ್ಠಾನಗೊಳಿಸಲು ಕಂಇ 44 ಭೂದಾಅ 2014; ದಿನಾಂಕ: 19.02.2014 ರಲ್ಲಿ ಸರ್ಕಾರವು ಆದೇಶ. ಸದರಿ ಆದೇಶದನ್ವಯ ಕಾಗದ ರಹಿತ ಪ್ರಮಾಣ ಪತ್ರಗಳ ಸೇವೆಯನ್ನು ಸಾರ್ವಜನಿಕರಿಗೆ ನೀಡಲು ಕ್ರಮ ಕೈಗೊಳ್ಳಲಾಗುತ್ತಿದ್ದು, ಈ ವ್ಯವಸ್ಥೆಯಡಿಯಲ್ಲಿ ಸಾರ್ವಜನಿಕರಿಗೆ ಗಣಕೀಕೃತವಾಗಿ ಅನುಮೋದಿಸಲ್ಪಟ್ಟ ಪ್ರಮಾಣ ಪತ್ರಗಳನ್ನು ನೀಡದೇ ಪ್ರಮಾಣ ಪತ್ರದ ಗಣಕೀಕೃತ ಸಂಖ್ಯೆಯನ್ನು ಎಸ್ಎಂಎಸ್ ಮೂಲಕ ನೀಡಲಾಗುವುದು. ಈ ಗಣಕೀಕೃತ ಪ್ರಮಾಣ ಪತ್ರದ ಸಂಖ್ಯೆಯನ್ನು ನಾಗರೀಕರು ಬೇರೆ ಇಲಾಖೆಗಳಲ್ಲಿ ಸೌಲಭ್ಯ ಪಡೆಯಲು ಸಲ್ಲಿಸುವ ಅರ್ಜಿಯಲ್ಲಿ ನಮೂದಿಸಿದ್ದಲ್ಲಿ, ಸಂಬಂಧಿಸಿದ ಇಲಾಖೆಯವರು ಈ ಗಣಕೀಕೃತ ಸಂಖ್ಯೆಯ ಪ್ರಮಾಣ ಪತ್ರದ ಸಿಂಧುತ್ವ/ನೈಜತೆಯನ್ನು ನಾಡಕಛೇರಿ ದತ್ತಾಂಶದ ಮೂಲಕ ಪಡೆದು ಪರಿಶೀಲಿಸಬಹುದಾಗಿದೆ.

ವೇದಗಂಗಾ ನದಿಗೆ ಬ್ರಿಡ್ಜ್–ಕಂ–ಬಾಂದಾರ ನಿರ್ಮಾಣ

921 (1550); ಶ್ರೀಮತಿ ಜೊಲ್ಲೆ ಶಶಿಕಲಾ ಅಣ್ಣಾಸಾಹೇಬ್

ಅ) ಚಿಕ್ಕೋಡಿ ತಾಲ್ಲೂಕಿನ ಜತ್ರಾಟ ಗ್ರಾಮದ ಹತ್ತಿರ ಇರುವ ವೇದಗಂಗಾ ನದಿಯಲ್ಲಿ ಒಳ ಹರಿವು ಯಾವ ಯಾವ ಅವಧಿಯಲ್ಲಿ ಎಷ್ಟು ಇತ್ತು; ಕಳೆದ ಒಂದು ವರ್ಷದಿಂದ ಈವರೆಗೂ ಒಳ ಹರಿವು ಇದೆಯೇ; ಇಲ್ಲವಾದಲ್ಲಿ, ಜತ್ರಾಟ ಗ್ರಾಮದ ಹತ್ತಿರ ಬ್ರಿಡ್ಜ್–ಕಂ–ಬಾಂದಾರ ಕಾಮಗಾರಿಯನ್ನು ಪ್ರಾರಂಭಿಸದಿರಲು ಕಾರಣವೇನು; ಇದರಿಂದ ಸಾರ್ವಜನಿಕರು ಅನುಭವಿಸುತ್ತಿರುವ ತೊಂದರೆಯು ಸರ್ಕಾರದ ಗಮನಕ್ಕೆ ಬಂದಿದೆಯೇ;